641 (1075) ಶ್ರೀ ಶ್ರೀರಾಮರೆಡ್ಡಿ ಜಿ ಏ (ಬಾಗೇಪಲ್ಲಿ) ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಪಶುವೈದ್ಯ ಹುದ್ದೆಗಳ ಸಂಖ್ಯೆ ಎಷ್ಟು?

ಆ) ಇವುಗಳ ಪೈಕಿ ಭರ್ತಿಯಾಗಿರುವ ಮತ್ತು ಖಾಲಿ ಇರುವ ಪಶುವೈದ್ಯ ಹುದ್ದೆಗಳ ಸಂಖ್ಯೆ ಎಷ್ಟು?

ಇ) ಖಾಲಿ ಇರುವ ಪಶುವೈದ್ಯ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ರೇವು ನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು)

ಅ) ರಾಜ್ಯದಲ್ಲಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯಲ್ಲಿ ಒಟ್ಟಾರೆ 1985 ಪಶುವೈದ್ಯಾಧಿಕಾರಿಗಳ ಹುದ್ದೆಗಳಿವೆ

ಆ) ಇವುಗಳಲ್ಲಿ 1161 ಹುದ್ದೆಗಳು ಭರ್ತಿಯಾಗಿದ್ದು, 824 ಹುದ್ದೆಗಳು ಖಾಲಿ ಇವೆ

ಇ) ಶೇಕಡಾ 90 ರಷ್ಟು ಸಹಾಯಕ ನಿರ್ದೇಶಕರ ಹುದ್ದೆಗಳನ್ನು ಮುಂಬಡ್ತಿ ಮುಖೇನ ಭರ್ತಿ ಮಾಡಲಾಗುವುದು ಶೇ 10% ರಷ್ಟು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಬೇಕಾಗಿದ್ದು 4 ಸಹಾಯಕ ನಿರ್ದೇಶಕರ ಹುದ್ದೆಗಳನ್ನು ನೇರ ನೇಮಕಾತಿಗಾಗಿ ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ ಪಶುವೈದ್ಯಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡುವ ಕ್ರಮ ಇದ್ದು, ಪ್ರಸ್ತುತ ಕರ್ನಾಟಕ ಲೋಕ ಸೇವಾ ಆಯೋಗದಿಂದ 41 ಪಶುವೈದ್ಯಾಧಿಕಾರಿಗಳ ನೇಮಕಾತಿಗೆ ಸಂದರ್ಶನ ಮುಗಿದಿದ್ದು, ನೇಮಕಾತಿ ಆದೇಶ ನೀಡಬೇಕಾಗಿದೆ ಮತ್ತೆ 77 ಪಶುವೈದ್ಯಾಧಿಕಾರಿಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ ವಿಶೇಷ ನೇಮಕಾತಿ ನಿಯಮ 2003ರ ಅಡಿ 577 ಪಶುವೈದ್ಯಾಧಿಕಾರಿಗಳನ್ನು ನೇಮಕಾತಿ ಮಾಡಬೇಕಾಗಿದ್ದು, ಇದುವರೆಗೆ 383 ಪಶುವೈದ್ಯಾಧಿಕಾರಿಗಳನ್ನು ನೇಮಕಾತಿ ಮಾಡಲಾಗಿದ್ದು ಉಳಿಕೆ 194 ಪಶುವೈದ್ಯಾಧಿಕಾರಿಗಳ ನೇಮಕಾತಿ ಮಾಡಲು ಪ್ರಸ್ತಾವನೆ ಸಹ ಪರಿಶೀಲನೆಯಲ್ಲಿದೆ ಪಶುವೈದ್ಯಕೀಯ ಮೇಲ್ವಿಚಾರಕರು ಮತ್ತು ಹಿರಿಯ ಪಶುವೈದ್ಯಕೀಯ ಪರೀಕ್ಷಕರು ಹುದ್ದೆಯನ್ನು ಮುಂಬಡ್ತಿ ಮುಖೇನ ಭರ್ತಿ

ಮಾಡಲಾಗುತ್ತದೆ 300 ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ ಪಶುವೈದ್ಯಕೀಯ ಸಹಾಯಕರ ಹುದ್ದೆಗಳನ್ನು ಇಲಾಖೆಯಲ್ಲಿನ ಎಸ್ ಎಸ್ ಎಲ್ ಸಿ ಪಾಸ್ಸಾದ ಡಿ ದರ್ಜೆ ನೌಕರರಿಗೆ ತರಬೇತಿ ನೀಡಿ ಬಡ್ತಿ ಮುಖೇನ ತುಂಬಲು ಕ್ರಮವಹಿಸಿದ್ದು ಈಗಾಗಲೇ 244 ಡಿ ದರ್ಜೆ ನೌಕರರಿಗೆ ತರಬೇತಿ ನೀಡಲಾಗಿದೆ ಎಸ್ ಎಸ್ ಎಲ್ ಸಿ ಅಂಕಪಟ್ಟಿ ಪರೀಕ್ಷೆ ಮಂಡಳಿಯ ಪರಿಶೀಲನೆಗೆ ಕಳುಹಿಸಿದ್ದು ವರದಿ ಬಂದ ಕೂಡಲೇ ಭರ್ತಿ ಮಾಡಲು ಕ್ರಮ ಜರುಗಿಸಲಾಗುವುದು 300 ಡಿ ದರ್ಜೆ ನೌಕರರ ಹುದ್ದೆಗಳನ್ನು ಔಟ್ ಸೋರ್ಸ್ ಮುಖೇನ ಭರ್ತಿ ಮಾಡಲು ಕ್ರಮ ಜರುಗಿಸಲಾಗುತ್ತಿದೆ

642 (876) ಶ್ರೀಮತಿ ಸುನಿತ ವೀರಪ್ಪಗೌಡ ಜೆ (ಬನ್ನೂರು) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ದಾದಿಯರ ಹುದ್ದೆಗಳೆಷ್ಟು?

ಆ) ಈ ಹುದ್ದೆಗಳಿಗೆ ನೇಮಕ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ದಾದಿಯರ ಸಂಖ್ಯೆ 536

ಆ) ದಾದಿಯರನ್ನು ನೇಮಕ ಮಾಡಲು ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಗಳು ಪರಿಶೀಲನೆಯಲ್ಲಿದ್ದು, ಪ್ರಕ್ರಿಯೆ ಅಂತಿಮ ಹಂತದಲ್ಲಿದ್ದು, ನೇಮಕಾತಿ ಪ್ರಕ್ರಿಯೆ ಮುಗಿದ ಕೂಡಲೇ ಆದ್ಯತೆ ಮೇರೆಗೆ ಭರ್ತಿ ಮಾಡಲಾಗುವುದು

643 (877) ಶ್ರೀಮತಿ ಸುನಿತ ವೀರಪ್ಪಗೌಡ ಜೆ (ಬನ್ನೂರು) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಟ್ಟಡಗಳಿಲ್ಲದೆ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳೆಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

ಆ) ಈ ಕೇಂದ್ರಗಳಿಗೆ ಕಟ್ಟಡ ನಿರ್ಮಿಸಲು ಅನುದಾನ ಬಿಡುಗಡೆ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ?

ಇ) ಹಾಗಿದ್ದಲ್ಲಿ, ಯಾವಾಗ ಅನುದಾನ ಬಿಡುಗಡೆ ಮಾಡಲಾಗುವುದು?